ಕರ್ನಾಟಕ ಸರ್ಕಾರ

# ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-01

ಸಂಖ್ಯೆ: ಸಿ7(8) ಆರ್ ಟಿ ಇ ಪ್ರಪ್ರ/2017-18 ದಿನಾಂಕ:03-05-2017

## : : ಸುತ್ತೋಲೆ : :

ವಿಷಯ:- ಶಿಕ್ಷಣ ಹಕ್ಕು ಕಾಯಿದೆ ಅಡಿ 2ನೇ ಸುತ್ತಿನ ಲಾಟರಿ ಪ್ರಕ್ರಿಯೆಗೆ ಪೂರ್ವ ಸಿದ್ದತೆ.

ಉಲ್ಲೇಖ: ಈ ಕಾರ್ಯಾಲಯದ ಸುತ್ತೋಲೆ ಸಂಖ್ಯೆ:ಸಿ7(8) ಆರ್.ಟಿ.ಇ ಸೀಟು ಹಂಚಿಕೆ 01 /2017-18 ದಿನಾಂಕ: 02.05.2017

************

ದಿನಾಂಕ: 28.04.2017 ರಂದು ನಡೆದ ಮೊದಲ ಸುತ್ತಿನ ಆನ್‌ಲೈನ್ ಲಾಟರಿ ಪ್ರಕ್ರಿಯೆಯಲ್ಲಿ ಈಗಾಗಲೇ ಸೀಟು ಹಂಚಿಕೆ ಆಗಿರುವ ಮಕ್ಕಳಿಗೆ ಶಾಲಾ ಬದಲಾವಣೆ ಮಾಡಿಕೊಳ್ಳಲು ಅಥವಾ ಹೊಸದಾಗಿ ಅರ್ಜಿ ಸಲ್ಲಿಸಲು ಅವಕಾಶ ಇರುವುದಿಲ್ಲ.

ಮೊದಲ ಸುತ್ತಿನ ಸೀಟು ಹಂಚಿಕೆಯ ನಂತರ ಶಾಲಾವಾರು ಹಾಲಿ ಖಾಲಿ ಉಳಿದಿರುವ ಸೀಟುಗಳ ಮಾಹಿತಿಯನ್ನು ಇಲಾಖಾ ವೆಬ್‌ಸೈಟ್ www.schooleducation.kar.nic.in ನಲ್ಲಿ ಪ್ರಕಟಿಸಲಾಗಿದೆ. ಈಗಾಗಲೇ ಅರ್ಜಿ ಸಲ್ಲಿಸಿ ಲಾಟರಿ ಮುಖಾಂತರ ಸೀಟು ಹಂಚಿಕೆಯಾಗದೆ ಇರುವವರು ಅವರ ನೆರೆಹೊರೆಯಲ್ಲಿರುವ ಶಾಲೆಗಳ ಆಯ್ಕೆ ಬದಲಾಯಿಸಲು ಇಚ್ಚಿಸಿದಲ್ಲಿ ಶಾಲೆಗಳ ಆಯ್ಕೆ ಬದಲಾಯಿಸಲು ಅವಕಾಶ ಮಾಡಿಕೊಡಲಾಗಿದೆ.

ಈಗಾಗಲೇ ಸಲ್ಲಿಸಿರುವ ಅರ್ಜಿಯು Invalid ಎಂದು ಪರಿಗಣಿಸಲ್ಪಟ್ಟಿದ್ದಲ್ಲಿ ಹೊಸದಾಗಿ ಅರ್ಜಿ ಸಲ್ಲಿಸಲು ಅವಕಾಶ ಮಾಡಕೊಡಲಾಗಿದೆ.

ಇದುವರೆಗೆ ಅರ್ಜಿ ಸಲ್ಲಿಸದೇ ಇರುವವರು ಅವರ ನೆರೆಹೊರೆಯಲ್ಲಿರುವ ಶಾಲೆಗಳಲ್ಲಿ ಹಾಲಿ ಖಾಲಿ ಉಳಿದಿರುವ ಸೀಟುಗಳಿಗೆ ಹೊಸದಾಗಿ ಅರ್ಜಿ ಸಲ್ಲಿಸಲು ಬಯಸಿದಲ್ಲಿ ಅವಕಾಶ ಮಾಡಿಕೊಡಲಾಗಿದೆ. ಮೇಲ್ಕಾಣಿಸಿದ ಪ್ರಕ್ರಿಯೆಗೆ ದಿನಾಂಕ: 04.05.2017 ರಿಂದ 09.05.2017 ರವರೆಗೆ ಅವಕಾಶ ಮಾಡಿಕೊಡಲಾಗಿದೆ.

ಮೇಲ್ಕಾಣಿಸಿದಂತೆ ಎರಡನೇ ಸುತ್ತಿನ ಪ್ರವೇಶ ಪ್ರಕ್ರಿಯೆಗೆ ಅರ್ಜಿ ಸ್ವೀಕರಿಸಲು ಉಪನಿರ್ದೇಶಕರು(ಆಡಳಿತ), ಕ್ಷೇತ್ರ ಶಿಕ್ಷಣಾಧಿಕಾರಿಗಳು, ಬೆಂಗಳೂರು ಒನ್, ಕರ್ನಾಟಕ ಒನ್, ಅಟಲ್‌ಜೀ ಜನಸ್ನೇಹಿ ಕೇಂದ್ರಗಳಲ್ಲಿ ಪೂರ್ವ ಸಿದ್ದತೆ ಮಾಡಿಕೊಳ್ಳಲು ತಿಳಿಸಲಾಗಿದೆ.

ಹೊಸದಾಗಿ ಅರ್ಜಿ ಸಲ್ಲಿಸುವ ಅಥವಾ ಶಾಲಾ ಆದ್ಯತೆ ಆಯ್ಕೆ ಬದಲಾಯಿಸುವ ಪ್ರಕ್ರಿಯೆಯು ದಿನಾಂಕ: 04.03.2017 ಮತ್ತು 06.03.2017 ರ ಸರ್ಕಾರದ ಆದೇಶಗಳ ಷರತ್ತುಗಳಿಗೆ ಒಳಪಟ್ಟಿರುತ್ತದೆ.

ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ
3/5/17

ಗೆ,

1. ನಿರ್ದೇಶಕರು, ಅಟಲ್‌ಜೀ ಜನಸ್ನೇಹಿ ಕೇಂದ್ರ, ನಿರ್ದೇಶಕರ ಕಛೇರಿ, ಅಟಲ್‌ಜೀ ಜನಸ್ನೇಹಿ ಕೇಂದ್ರ, ಕೆ.ಆರ್. ವೃತ್ತ, ಬೆಂಗಳೂರು.
2. ನಿರ್ದೇಶಕರು, ಸೇವೆಗಳ ವಿದ್ಯುನ್ಮಾನ ವಿತರಣೆ, ಬಹುಮಹಡಿಗಳ ಕಟ್ಟಡ, ಅಂಬೇಡ್ಕರ್ ವೀದಿ, ಬೆಂಗಳೂರು
3. ಎಲ್ಲಾ ಉಪನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ಇವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
4. ಎಲ್ಲಾ ವಲಯ/ತಾಲ್ಲೂಕು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಎಲ್ಲಾ ಉಪನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ ಇವರ ಮುಖಾಂತರ ಸೂಕ್ತ ಕ್ರಮಕ್ಕಾಗಿ.
5. ಕಛೇರಿ ಪ್ರತಿ.